**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿಸಿ ಸಂಖ್ಯೆ : 62/2022**

**ಚಾ.ಸಾಃ 10, ಪ್ರಾ.ಸಾಃ 02**

| | |
|---|---|
| ಸಾಕ್ಷಿದಾರನ ಹೆಸರು | ಶ್ರೀಮತಿ ಸಾವಿತ್ರಿ ನಾಯ್ಕ |
| ಗಂಡನ ಹೆಸರು | ಆನಂದು ನಾಯ್ಕ |
| ವಯಸ್ಸು | 53 ವರ್ಷಗಳು |
| ಉದ್ಯೋಗ | ಆರಕ್ಷಕ ಉಪ-ನಿರೀಕ್ಷಕರು, ಕುಮಟಾ ಪೋಲೀಸ್ ಠಾಣೆ |
| ವಾಸ್ತವ್ಯ | ಕುಮಟಾ |

**ಸಾಕ್ಷಿಯನ್ನು ದಿನಾಂಕಃ 06-02-2026 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ದಂಡ ಪ್ರಕ್ರಿಯಾ ಸಂಹಿತೆ ಕಲಂ 299 ರಡಿಯಲ್ಲಿ ಸಾಕ್ಷಿ ವಿಚಾರಣೆಃ**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ಅಗಸ್ಟ-2018 ರಿಂದ ಮೇ-2022 ರ ವರೆಗೆ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಆರಕ್ಷಕ ಉಪ-ನಿರೀಕ್ಷಕಳಾಗಿ ಕೆಲಸ ಮಾಡಿರುತ್ತೇನೆ.

ದಿನಾಂಕಃ **30-09-2019** ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಮಾನ್ಯ ನ್ಯಾಯಾಲಯದಿಂದ ಬಂದ ಖಾಸಗಿ ದೂರಿನ ಪ್ರತಿಯನ್ನು ಪಡೆದು ಠಾಣಾ ಮೊಕದ್ದಮೆ ನಂ.269/2019 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದೂರಿನ ಪ್ರತಿಯನ್ನು ನೋಡುತ್ತಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ದಿನಾಂಕ 01-10-2019 ರಂದು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪಿರ್ಯಾದಿ ತೋರಿಸಿದ ಸ್ಥಳದಲ್ಲಿ ಪಂಚರ ಸಮಕ್ಷಮ ಸ್ಥಳ ಪಂಚನಾಮೆ ಮಾಡಿ, ಭಾವಚಿತ್ರ ತೆಗೆಸಿರುತ್ತೇನೆ. ಸ್ಥಳ ಪಂಚನಾಮೆಯ ಪ್ರತಿಯನ್ನು ನೋಡುತ್ತಿದ್ದು ನಿಪಿ-1 ಎಂದು ಗುರುತಿಸಲಾಗಿದೆ.

ದಿನಾಂಕ 02-10-2019 ರಂದು ಪಿರ್ಯಾದಿಯ ಮರುಹೇಳಿಕೆ ಮತ್ತು ಚಾಸಾ-4 ಮತ್ತು 5 ರವರ ಹೇಳಿಕೆ ಪಡೆದಿರುತ್ತೇನೆ.

ದಿನಾಂಕ 16-11-2019 ರಂದು ಚಾಸಾ-6 ಮತ್ತು 7 ರವರ ಹೇಳಿಕೆ ಪಡೆದಿರುತ್ತೇನೆ.

ದಿನಾಂಕ 29-11-2019 ರಂದು 2 ರಿಂದ 5 ನೇ ಆರೋಪಿತರು ಠಾಣೆಗೆ ಹಾಜರಾಗಿ ಮಾನ್ಯ ಸತ್ರ ನ್ಯಾಯಾಲಯದ ನಿರೀಕ್ಷಣಾ ಜಾಮೀನು ಹಾಜರುಪಡಿಸಿದ್ದರಿಂದ ಅವರನ್ನು ಬಂಧಿಸಿ ಹೇಳಿಕೆ ಪಡೆದು ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. 1 ನೇ ಆರೋಪಿ ವಿದೇಶದಲ್ಲಿದ್ದರಿಂದ ಆತನನ್ನು ಬಂಧಿಸಿರುವುದಿಲ್ಲ. ಚಾಸಾ-8 ರವರು ಘಟನಾ ಸ್ಥಳದ ಮನೆಯ ಆಸ್ತಿ ತೆರಿಗೆ ಉತಾರನ್ನು

ಹಾಜರುಪಡಿಸಿದ್ದು ಅದನ್ನು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ತನಿಖೆ ಪೂರೈಸಿ ಆರೋಪಿತರ ವಿರುದ್ಧ ದೋಷಾರೋಪಣ ಪಟ್ಟಿ ಸಲ್ಲಿಸಿರುತ್ತೇನೆ.

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**